ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE: 19/2/21

ಎಲ್ಲಾ ಸಚಿವರಿಂದ ಅಭಿಪ್ರಾಯ ಸಂಗ್ರಹ • ಮುಂದಿನ ಸಂಪುಟ ಸಭೆಯಲ್ಲಿ ಮತ್ತೆ ಚರ್ಚೆ

# ಮೀಸಲಾತಿ: ನ್ಯಾಯಸಮ್ಮತ ತೀರ್ಮಾನ

ಪ್ರಜಾವಾಣಿ ವಾರ್ತೆ 19-2-21

ಬೆಂಗಳೂರು: ಮೀಸಲಾತಿ ಸ್ಥಿತಿಗತಿ ಕುರಿತು ವಿವಿಧ ಸಮುದಾಯಗಳು ಸಲ್ಲಿಸಿರುವ ಮನವಿ ಮತ್ತು ಬೇಡಿಕೆಗಳ ಬಗ್ಗೆ ಸುಪ್ರೀಂಕೋರ್ಟ್ ತೀರ್ಪುಗಳು ಹಾಗೂ ಸಂವಿಧಾನದ ಚೌಕಟ್ಟಿನಲ್ಲಿ ನ್ಯಾಯಸಮ್ಮತ ತೀರ್ಮಾನ ತೆಗೆದುಕೊಳ್ಳಲು ಸಚಿವ ಸಂಪುಟ ಸಭೆ ನಿರ್ಧರಿಸಿದೆ.


ಮೀಸಲಾತಿ ಕುರಿತು ವಿವಿಧ ಸಮುದಾಯಗಳು ನಡೆಸುತ್ತಿರುವ ಹೋರಾಟಗಳು ಮತ್ತು ಬೇಡಿಕೆಗಳ ಬಗ್ಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಎಲ್ಲ ಸಚಿವರಿಂದ ಅಭಿಪ್ರಾಯಗಳನ್ನು ಪಡೆದು ವಿಸ್ತೃತ ಚರ್ಚೆ ನಡೆಸಿದರು ಎಂದು ಸಂಪುಟ ಸಭೆ ಬಳಿಕ ಕಾನೂನು ಸಚಿವ ಬಸವರಾಜ ಬೊಮ್ಮಾಯಿ ಸುದ್ದಿಗಾರರಿಗೆ ತಿಳಿಸಿದರು.

ಸಭೆಯಲ್ಲಿ ಎಲ್ಲ ಸಚಿವರು ತಮ್ಮ ಅಭಿಪ್ರಾಯಗಳನ್ನು ಮುಕ್ತವಾಗಿ ಹೇಳಿದರು. ಕೆಲವು ದೊಡ್ಡ ಸಮುದಾಯಗಳು ಹೋರಾಟದ ಮೂಲಕ ಮನವಿ ಸಲ್ಲಿಸಿದ್ದರೆ, ಇನ್ನು ಕೆಲವು ಸಣ್ಣ ಪುಟ್ಟ ಮತ್ತು ಪ್ರಬಲವಲ್ಲದ ಸಮುದಾಯಗಳು ಹಿಂದುಳಿದ ವರ್ಗಗಳ ಆಯೋಗಕ್ಕೆ ಮನವಿ ಸಲ್ಲಿಸಿವೆ. ಇವೆಲ್ಲವನ್ನೂ ಪರಿಗಣಿಸಬೇಕು. ಯಾರಿಗೂ ಅನ್ಯಾಯವಾಗಬಾರದು. ಸಂಪೂರ್ಣ ವಿವರಗಳನ್ನು ಪಡೆದು ಕಾನೂನು ತಜ್ಞರ ಜತೆ ಚರ್ಚಿಸಿ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ವಿಷಯವನ್ನು ಕೈಗೆತ್ತಿಕೊಳ್ಳಲು ಮುಖ್ಯಮಂತ್ರಿ ಸೂಚಿಸಿದರು ಎಂದು ಬೊಮ್ಮಾಯಿ ಹೇಳಿದರು.


ಬಸವರಾಜ ಬೊಮ್ಮಾಯಿ

ಸಂಪುಟ ಸಭೆ ಮುಗಿದ ಬಳಿಕ ಅಧಿಕಾರಿಗಳನ್ನು ಹೊರಗೆ ಕಳುಹಿಸಿ, ಅನೌಪಚಾರಿಕವಾಗಿ ಮೀಸಲಾತಿ ವಿಷಯವನ್ನು ಚರ್ಚಿಸಲಾಯಿತು. ಆಗ ಹಲವು ಸಚಿವರು ತಮ್ಮ ಸಮುದಾಯದ ಬೇಡಿಕೆಗಳನ್ನು ಮುಂದಿಟ್ಟು, ಈಡೇರಿಸುವ ಅನಿವಾರ್ಯವನ್ನು ಪ್ರತಿಪಾದಿಸಿದರು. ಮುಖ್ಯಮಂತ್ರಿಯವರು ಎಲ್ಲ ಮಾತುಗಳನ್ನೂ ಆಲಿಸಿದರು ಎಂದು ಮೂಲಗಳು ಹೇಳಿವೆ.

ಕುರುಬರು, ಲಿಂಗಾಯತ ಪಂಚಮಸಾಲಿ, ವಾಲ್ಮೀಕಿ, ಆದಿ ಜಾಂಬವ, ನೇಕಾರ, ಉಪ್ಪಾರ, ಮಡಿವಾಳ ಸಮುದಾಯಗಳು ಈಗಾಗಲೇ ಹೋರಾಟ ಆರಂಭಿಸಿದ್ದರೆ, ಒಕ್ಕಲಿಗರು ಸೇರಿ ಇನ್ನೂ ಹಲವು ಸಮುದಾಯಗಳ ಸ್ವಾಮೀಜಿಗಳು ತಮ್ಮ ಸಮುದಾಯಗಳ ಪರವಾಗಿ ಮೀಸಲಾತಿಯಲ್ಲಿ ಪಾಲಿಗಾಗಿ ಪಟ್ಟು ಹಿಡಿದಿದ್ದಾರೆ. ಕುರುಬ ಸಮಾಜ ಈಗಾಗಲೇ ದೊಡ್ಡ ಮಟ್ಟದ ಸಮಾವೇಶ ನಡೆಸಿದ್ದು, ಪಂಚಮಸಾಲಿ ಸಮುದಾಯ ಕೂಡ ಶಕ್ತಿ ಪ್ರದರ್ಶನಕ್ಕೆ ಸಜ್ಜಾಗಿದೆ. ಇವೆಲ್ಲದರ ಸೂಕ್ಷ್ಮತೆಯ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು ಎಂದು ಮೂಲಗಳು ತಿಳಿಸಿವೆ.



## 'ವರದಿ ಬಿಡುಗಡೆಗೆ ಆಗ್ರಹ'

ಮಡಿಕೇರಿ: ಹಿಂದುಳಿದ ವರ್ಗಗಳ ಶಾಶ್ವತ ಆಯೋಗ ರಾಜ್ಯದಲ್ಲಿ ನಡೆಸಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ವರದಿ ಸ್ವೀಕರಿಸಿ, ಬಿಡುಗಡೆ ಮಾಡಬೇಕು ಎಂದು 'ಅಹಿಂದ' ಒಕ್ಕೂಟದ ಜಿಲ್ಲಾ ಘಟಕ ಆಗ್ರಹಪಡಿಸಿದೆ.

ಗುರುವಾರ ನಗರದಲ್ಲಿ ಈ ಬಗ್ಗೆ ಪ್ರತಿಭಟನೆ ನಡೆಯಿತು. 'ವರದಿ ಅನುಷ್ಠಾನಗೊಂಡರೆ, ಮೀಸಲಾತಿ ದೊರಕದಿರುವ ಸಣ್ಣ ಜಾತಿಗಳಿಗೆ ವೈಜ್ಞಾನಿಕವಾಗಿ ಸೌಲಭ್ಯ ಪಡೆಯಲು ಸಾಧ್ಯವಾಗಲಿದೆ. ರಾಜ್ಯದಲ್ಲಿರುವ ಜಾತಿಗಳ ಅಂಕಿ–ಅಂಶಗಳು ಅಧಿಕೃತವಾಗಿ ದೊರೆಯಲು ಸಾಧ್ಯವಾಗಲಿದೆ' ಎಂದು ಒಕ್ಕೂಟದ ಸ್ಥಾಪಕ ಅಧ್ಯಕ್ಷ ಟಿ.ಪಿ. ರಮೇಶ್ ಹೇಳಿದರು.